**<u>ದಿನಾಂಕ 06.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಪಾಟೀ ಸವಾಲುಃ 3ನೇ ಎದುರುದಾರರ ಪರ ಮಾನ್ಯ ವಕೀಲರಿಂದ .</u>**

ನಾನು ಅವಿದ್ಯಾವಂತ. ಪ್ರಮಾಣ ಪತ್ರದ ಸಂಗತಿಗಳು ನನಗೆ ಗೊತ್ತಿಲ್ಲ. ನನ್ನ ವಾಹನವನ್ನು 3ನೇ ಎದುರುದಾರರಿಗೆ ಮಾರಾಟ ಮಾಡಿದ ಬಗ್ಗೆ ಕೆಲವು ದಾಖಲಾತಿಗಳಿಗೆ ಸಹಿ ಮಾಡಿದ್ದು, ಲಿಖಿತ ದಾಖಲಾತಿ ಪ್ರತ್ಯೇಕವಾಗಿ ಮಾಡಿಕೊಂಡಿರುವುದಿಲ್ಲ. ಅಪಘಾತವಾದ ದಿನಾಂಕದಂದು ಆಪಾದಿತ ವಾಹನ ನನ್ನ ಹೆಸರಿನಲ್ಲಿತ್ತು ಎಂದರೆ ಸರಿಯಲ್ಲ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಆಪಾದಿತ ವಾಹನ ನನ್ನ ಹೆಸರಿನಲ್ಲಿ ಇರಲಿಲ್ಲ ಎಂಬ ಬಗ್ಗೆ ಸಂಬಂಧಪಟ್ಟವರನ್ನು ಕರೆಯಿಸಿ ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ ಎಂದರೆ ಸರಿ.

ನನ್ನ ಮತ್ತು 3ನೇ ಎದುರುದಾರರ ನಡುವೆ ಸಣ್ಣಪುಟ್ಟ ವೈ ಮನಸ್ಸು ಇತ್ತು ಎಂದರೆ ಸರಿಯಲ್ಲ. ಅಪಘಾತವಾದ ನಂತರ ಪೊಲೀಸರು ನನಗೆ ನೋಟೀಸು ನೀಡಿಲ್ಲ. ನಿಪಿ 10 ರಲ್ಲಿರುವ ಸಹಿ ನನ್ನದು. ನಿಪಿ 11 ರಂತೆ ನಾನು ಉತ್ತರವನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 11 ರಲ್ಲಿರುವ ಸಹಿ ನನ್ನದು. ಸಾಕ್ಷಿಯು ನಾನು ವಾಹನವನ್ನು ಮಾರಾಟ ಮಾಡಿದ ವಿಚಾರವನ್ನು ಪೊಲೀಸರಿಗೆ ತಿಳಿಸಿದ್ದೆ ಎಂದು ನುಡಿಯುತ್ತಾರೆ. ಆ ದಿನ 3ನೇ ಎದುರುದಾರರ ವಾಹನವನ್ನು ಚಾಲನೆ ಮಾಡಿದ ಬಗ್ಗೆ ನಾನು ಖುದ್ದಾಗಿ ನೋಡಿಲ್ಲ ಮತ್ತು ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. 3ನೇ ಎದುರುದಾರರು ಮತ್ತು ನನ್ನ ನಡುವೆ ವೈಮನಸ್ಸು ಇದ್ದ

ಕಾರಣ ಅವರ ವಿರುದ್ದ ಸುಳ್ಳು ಹೇಳಿಕೆ ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 3ನೇ ಎದುರುದಾರರು ನನ್ನಿಂದ ವಾಹನ ಖರೀದಿ ಮಾಡಿಲ್ಲ ಮತ್ತು ಅಪಘಾತವಾದ ದಿನ ಅವರು ವಾಹನವನ್ನು ಚಾಲನೆ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ದಿನಾಂಕದಂದು ವಾಹನ ನನ್ನ ಹೆಸರಿನಲ್ಲಿಯೇ ಇದ್ದು, ನಾನು 3ನೇ ಎದುರುದಾರರನ್ನು ಸಿಲುಕಿಸುವ ಉದ್ದೇಶದಿಂದ ಮತ್ತು ಪರಿಹಾರ ಪಾವತಿಸಬೇಕಾಗುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಾವತಿಸುವ ಹೊಣೆಗಾರಿಕೆ ನನ್ನದೇ ಆಗಿದ್ದು, 3ನೇ ಎದುರುದಾರರು ಪರಿಹಾರ ಪಾವತಿಸಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. 3ನೇ ಎದುರುದಾರರಿಗೂ, ಪ್ರಸ್ತುತ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ .**

ಅಪಘಾತವಾದ ದಿನಾಂಕದಂದು ಆಪಾದಿತ ವಾಹನಕ್ಕೆ ವಿಮೆ ಚಾಲ್ತಿಯಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಪೊಲೀಸರು ಸಂಪೂರ್ಣ ತನಿಖೆ ಮಾಡಿ ಅಂತಿಮ ವರದಿ ಸಲ್ಲಿಸಿದ್ದು, ಆಪಾದಿತ ವಾಹನಕ್ಕೆ ವಿಮೆ ಇರಲಿಲ್ಲ ಎಂದು ಸದರಿ ಅಂತಿಮ ವರದಿಯಲ್ಲಿ ನಮೂದಿಸಿದ್ದಾರೆ ಎಂದರೆ ಅದರ ಬಗ್ಗೆ ನನಗೆ ಗೊತ್ತಿಲ್ಲ. ಆಪಾದಿತ ವಾಹನಕ್ಕೆ ಸಂಬಂಧಿಸಿದ ವಿಮಾ ಪ್ರತಿಯನ್ನು ಹಾಜರುಪಡಿಸಲು ತೊಂದರೆ ಇದೆ. ಸಾಕ್ಷಿಗೆ ತೊಂದರೆ ಏನು ಎಂದು ಕೇಳಲಾಗಿ ಉತ್ತರಿಸದೇ ನಿಂತಿರುತ್ತಾರೆ. ವಾಹನಕ್ಕೆ ವಿಮೆ ಇಲ್ಲದೇ ಇದ್ದರೂ ಸಹ ಅದನ್ನು ಚಾಲನೆ ಮಾಡಲು ಅವಕಾಶ ನೀಡಿದ್ದು, ನಾನು ಸದರಿ ದಿನಾಂಕದಂದು

ವಾಹನದ ಮಾಲಿಲಕನಾಗಿದ್ದ ಕಾರಣ ಪರಿಹಾರ ಪಾವತಿಸಲು ಬಾಧ್ಯಸ್ಥ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**